# All India Radio: Bangalore
# National Bulletin In Kannada
# 18.01.2026  19.35 p.m.

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**18.01.2026  19.35 p.m.**

***************

**ಮುಖ್ಯಾಂಶಗಳು**

1. **ಅಸ್ಸಾಂನಲ್ಲಿ ಇಂದು 6 ಸಾವಿರದ 950 ಕೋಟಿ ರೂಪಾಯಿ ಮೌಲ್ಯದ ಕಾಜಿರಂಗ ಎಲವೆಟೆಡ್ ಕಾರಿಡಾರ್ ಯೋಜನೆಗೆ ಪ್ರಧಾನಿ ನರೇಂದ್ರ ಮೋದಿ ಶಂಕುಸ್ಥಾಪನೆ**
2. **ನವದೆಹಲಿಯಲ್ಲಿಂದು ಪಿಎಂ ವಿಶ್ವಕರ್ಮ ಹಾತ್ 2026 ಉದ್ಘಾಟನೆ**
3. **ಅಂಡಮಾನ್‌ನಲ್ಲಿ ಇಂದು ಭಾರತದ ಮೊದಲ ತೆರೆದ ಸಮುದ್ರ ಮೀನುಸಾಕಣೆ ಯೋಜನೆಗೆ ಚಾಲನೆ**
4. **ಏಕದಿನ ಕ್ರಿಕೆಟ್ ಸರಣಿಯ ಅಂತಿಮ ಪಂದ್ಯದಲ್ಲಿ ಭಾರತಕ್ಕೆ 338 ರನ್‌ಗಳ ಗುರಿ ನೀಡಿದ ನ್ಯೂಜಿಲ್ಯಾಂಡ್**

***************

ಅಸ್ಸಾಂನ ನಾಗಾಂವ್ ಜಿಲ್ಲೆಯ ಕಲಿಯಾಬೋರ್‌ನಲ್ಲಿ 6 ಸಾವಿರದ 950 ಕೋಟಿ ರೂಪಾಯಿಗಳಿಗೂ ಹೆಚ್ಚು ಮೌಲ್ಯದ ಕಾಜಿರಂಗ ಎಲಿವೇಟೆಡ್ ಕಾರಿಡಾರ್ ಯೋಜನೆಗೆ ಪ್ರಧಾನಿ ನರೇಂದ್ರ ಮೋದಿ ಇಂದು ಶಂಕುಸ್ಥಾಪನೆ ನೆರವೇರಿಸಿದರು.

86 ಕಿಲೋಮೀಟರ್ ಉದ್ದದ ಕಾಜಿರಂಗ ಎಲಿವೇಟೆಡ್ ಕಾರಿಡಾರ್ ಯೋಜನೆಯು ಪರಿಸರ ಸ್ನೇಹಿ ರಾಷ್ಟ್ರೀಯ ಹೆದ್ದಾರಿ ಯೋಜನೆಯಾಗಿದ್ದು, ಇದು ಕಾಜಿರಂಗ ರಾಷ್ಟ್ರೀಯ ಉದ್ಯಾನವನದ ಮೂಲಕ ಹಾದುಹೋಗುವ 35 ಕಿಲೋಮೀಟರ್, ಎಲಿವೇಟೆಡ್ ವನ್ಯಜೀವಿ ಕಾರಿಡಾರ್ ಅನ್ನು ಒಳಗೊಂಡಿರುತ್ತದೆ. ಉದ್ಯಾನವನದ ಶ್ರೀಮಂತ ಜೀವವೈವಿಧ್ಯತೆಯ ರಕ್ಷಣೆಯನ್ನು ಖಚಿತಪಡಿಸಿಕೊಳ್ಳುವ ಜೊತೆಗೆ ಪ್ರಾದೇಶಿಕ ಸಂಪರ್ಕವನ್ನು ಸುಧಾರಿಸುವ ಗುರಿಯನ್ನು ಈ ಯೋಜನೆ ಹೊಂದಿದೆ. ಎತ್ತರದ ವನ್ಯಜೀವಿ ಕಾರಿಡಾರ್ ಪ್ರಾಣಿಗಳ ನಿರಂತರ ಚಲನೆಯನ್ನು ಖಚಿತಪಡಿಸುತ್ತದೆ, ಮಾನವ–ವನ್ಯಜೀವಿ ಸಂಘರ್ಷವನ್ನು ಕಡಿಮೆ ಮಾಡುತ್ತದೆ.

ಕಲಿಯಾಬೋರ್‌ನಲ್ಲಿ ಅಭಿವೃದ್ಧಿ ಕಾರ್ಯಗಳ ಉದ್ಘಾಟನೆಯಲ್ಲಿ ಮಾತನಾಡಿದ ಅವರು, ಕಾಜಿರಂಗ ಕೇವಲ ರಾಷ್ಟ್ರೀಯ ಉದ್ಯಾನವನವಲ್ಲ, ಅಸ್ಸಾಂನ ಆತ್ಮ. ಯುನೆಸ್ಕೋ ಕಾಜಿರಂಗವನ್ನು ವಿಶ್ವ ಪರಂಪರೆಯ ತಾಣವೆಂದು ಗುರುತಿಸಿದೆ. ಇತ್ತೀಚಿನ ವರ್ಷಗಳಲ್ಲಿ ಕಾಜಿರಂಗದಲ್ಲಿ ಪ್ರವಾಸಿಗರ ಸಂಖ್ಯೆ ನಿರಂತರವಾಗಿ ಹೆಚ್ಚುತ್ತಿದೆ ಎಂದು ಒತ್ತಿ ಹೇಳಿದರು.

ಕಾಜಿರಂಗ ಮತ್ತು ಅದರ ವನ್ಯಜೀವಿಗಳನ್ನು ರಕ್ಷಿಸುವುದು ಕೇವಲ ಪರಿಸರ ಸಂರಕ್ಷಣೆಯ ಬಗ್ಗೆ ಮಾತ್ರವಲ್ಲ, ಅಸ್ಸಾಂನ ಭವಿಷ್ಯ ಮತ್ತು ಮುಂದಿನ ಪೀಳಿಗೆಯ ಜವಾಬ್ದಾರಿಯಾಗಿದೆ ಎಂದ ಪ್ರಧಾನಿ, ಅಸ್ಸಾಂನ ಬಿಜೆಪಿ ಸರ್ಕಾರವು ಒಳನುಸುಳುವಿಕೆಯನ್ನು ನಿಭಾಯಿಸುವುದು, ಕಾಡುಗಳನ್ನು ಸಂರಕ್ಷಿಸುವುದು, ಧಾರ್ಮಿಕ, ಸಾಂಸ್ಕೃತಿಕ ಮತ್ತು ಐತಿಹಾಸಿಕ ತಾಣಗಳನ್ನು ರಕ್ಷಿಸುವುದು ಮತ್ತು ಅವುಗಳನ್ನು ಅತಿಕ್ರಮಣದಿಂದ ಮುಕ್ತಗೊಳಿಸುವ ವಿಧಾನವನ್ನು ವ್ಯಾಪಕವಾಗಿ ಪ್ರಶಂಸಿಸಲಾಗುತ್ತಿದೆ ಎಂದು ಪ್ರಧಾನಿ ಹೇಳಿದರು.

ಕಳೆದ ದಶಕದಲ್ಲಿ ದೇಶದಲ್ಲಿ ಅರಣ್ಯ ಮತ್ತು ಮರಗಳ ವ್ಯಾಪ್ತಿ ಹೆಚ್ಚಾಗಿದೆ. ಏಕ್ ಪೆಡ್ ಮಾ ಕೆ ನಾಮ್ ಅಭಿಯಾನದಡಿಯಲ್ಲಿ ಇಲ್ಲಿಯವರೆಗೆ 260 ಕೋಟಿಗೂ ಹೆಚ್ಚು ಮರಗಳನ್ನು ನೆಡಲಾಗಿದೆ. ಪ್ರಕೃತಿ ಮತ್ತು ಅಭಿವೃದ್ಧಿ ಒಟ್ಟಾಗಿ ಪ್ರಗತಿ ಸಾಧಿಸಬಹುದು ಎಂದು ಭಾರತ ಜಗತ್ತಿಗೆ ಪ್ರದರ್ಶಿಸುತ್ತಿದೆ ಎಂದು ಮೋದಿ ಹೇಳಿದರು.

***************

ಪಶ್ಚಿಮ ಬಂಗಾಳದ ಹೂಗ್ಲಿ ಜಿಲ್ಲೆಯ ಸಿಂಗೂರಿನಲ್ಲಿ 830 ಕೋಟಿ ರೂಪಾಯಿಗಳಿಗೂ ಹೆಚ್ಚು ಮೌಲ್ಯದ ವಿವಿಧ ಅಭಿವೃದ್ಧಿ ಯೋಜನೆಗಳನ್ನು ಪ್ರಧಾನಿ ನರೇಂದ್ರ ಮೋದಿ ಇಂದು ಶಿಲಾನ್ಯಾಸ ನೆರವೇರಿಸಿ, ಉದ್ಘಾಟಿಸಿದರು.

ಒಳನಾಡಿನ ಜಲ ಸಾರಿಗೆ ಐಡಬ್ಲ್ಯೂಟಿ ಟರ್ಮಿನಲ್ ಮತ್ತು ರಸ್ತೆ ಮೇಲ್ಸೇತುವೆ ಸೇರಿದಂತೆ ಬಾಲಗಢದಲ್ಲಿ ವಿಸ್ತೃತ ಬಂದರು ದ್ವಾರ ವ್ಯವಸ್ಥೆಯ ಶಿಲಾನ್ಯಾಸವನ್ನು ಪ್ರಧಾನಿ ನೆರವೇರಿಸಿದರು.

ಕಾರ್ಯಕ್ರಮವನ್ನುದ್ದೇಶಿಸಿ ಮಾತನಾಡಿದ ಪ್ರಧಾನಿ, ಎಲ್ಲಾ ಕೇಂದ್ರ ಯೋಜನೆಗಳು ಪಶ್ಚಿಮ ಬಂಗಾಳದ ಅಭಿವೃದ್ಧಿಯನ್ನು ವೇಗಗೊಳಿಸುತ್ತವೆ. ಅಭಿವೃದ್ಧಿ ಹೊಂದಿದ ಪೂರ್ವ ಭಾರತದ ಗುರಿಯನ್ನು ಪೂರೈಸಲು ಕೇಂದ್ರ ಸರ್ಕಾರ ಕೆಲಸ ಮಾಡುತ್ತಿದೆ ಎಂದು ಅವರು ಹೇಳಿದರು.

ಸುಮಾರು 900 ಎಕರೆ ಪ್ರದೇಶದಲ್ಲಿ ವ್ಯಾಪಿಸಿರುವ ಬಾಲಗಢವನ್ನು ವಾರ್ಷಿಕ 2.7 ಮಿಲಿಯನ್ ಟನ್ ಎಂಟಿಪಿಎ ಸಾಮರ್ಥ್ಯದೊಂದಿಗೆ ಆಧುನಿಕ ಸರಕು ನಿರ್ವಹಣಾ ಟರ್ಮಿನಲ್ ಆಗಿ ಅಭಿವೃದ್ಧಿಪಡಿಸಲಾಗುತ್ತಿದೆ. ಈ ಯೋಜನೆಯು ಎರಡು ಮೀಸಲಾದ ಸರಕು ನಿರ್ವಹಣಾ ಜೆಟ್ಟಿಗಳ ನಿರ್ಮಾಣವನ್ನು ಒಳಗೊಂಡಿದೆ ಎಂದು ಅವರು ತಿಳಿಸಿದರು.

ಕಳೆದ ಹನ್ನೊಂದು ವರ್ಷಗಳಲ್ಲಿ ಕೇಂದ್ರವು ಕೋಲ್ಕತ್ತಾದ ಶ್ಯಾಮ ಪ್ರಸಾದ್ ಮುಖರ್ಜಿ ಬಂದರಿನ ಸಾಮರ್ಥ್ಯವನ್ನು ಅಭಿವೃದ್ಧಿಪಡಿಸುತ್ತಿದೆ ಮತ್ತು ಲಾಜಿಸ್ಟಿಕ್ಸ್ ಅಭಿವೃದ್ಧಿಗೆ ಸಹ ಕೊಡುಗೆ ನೀಡಿದೆ ಎಂದು ಪ್ರಧಾನಿ ಹೇಳಿದರು. ಈ ಎಲ್ಲಾ ಯೋಜನೆಗಳು ಉದ್ಯೋಗವನ್ನು ಸೃಷ್ಟಿಸುತ್ತವೆ. ಬಹುಮಾದರಿ ಸಂಪರ್ಕಕ್ಕೆ ಸರ್ಕಾರವು ವಿಶೇಷ ಪ್ರಾಮುಖ್ಯತೆಯನ್ನು ನೀಡಿದೆ.

ಪ್ರಧಾನಮಂತ್ರಿ ಜಯರಾಂಬಾಟಿ–ಬರೋಗೋಪಿನಾಥಪುರ–ಮೇನಾಪುರ ಹೊಸ ರೈಲು ಮಾರ್ಗವನ್ನು ಉದ್ಘಾಟಿಸಿದರು. ಈ ಮಾರ್ಗವು ತಾರಕೇಶ್ವರ–ಬಿಷ್ಣುಪುರ ಹೊಸ ರೈಲು ಮಾರ್ಗ ಯೋಜನೆಯ ಪ್ರಮುಖ ಭಾಗವಾಗಿದೆ. ಹೊಸ ರೈಲು ಮಾರ್ಗದ ಜೊತೆಗೆ, ಮೇನಾಪುರ ಮತ್ತು ಜಯರಾಂಬಾಟಿ ನಡುವಿನ ಹೊಸ ರೈಲು ಸೇವೆಗೆ, ಬರೋಗೋಪಿನಾಥಪುರದಲ್ಲಿ ನಿಲುಗಡೆಯೊಂದಿಗೆ ಚಾಲನೆ ನೀಡಲಾಗುವುದು.

ಮೂರು ಅಮೃತ್ ಭಾರತ್ ಎಕ್ಸ್‌ಪ್ರೆಸ್ ರೈಲುಗಳಿಗೆ – ಹೌರಾ – ಆನಂದ್ ವಿಹಾರ್ ಟರ್ಮಿನಲ್ ಅಮೃತ್ ಭಾರತ್ ಎಕ್ಸ್‌ಪ್ರೆಸ್; ಸೀಲ್ಡಾ – ಬನಾರಸ್ ಅಮೃತ್ ಭಾರತ್ ಎಕ್ಸ್‌ಪ್ರೆಸ್; ಸಂತ್ರಗಚಿ–ತಾಂಬರಂ ಅಮೃತ್ ಭಾರತ್ ಎಕ್ಸ್‌ಪ್ರೆಸ್ ಮತ್ತು ಒಂದು ಪ್ರಯಾಣಿಕ ಎಕ್ಸ್‌ಪ್ರೆಸ್ ಅನ್ನು ಪ್ರಧಾನಿ ಉದ್ಘಾಟಿಸಿದರು.

***************

ಎಂಎಸ್ಎಂಇಗಳನ್ನು ದೇಶದ ಅಭಿವೃದ್ಧಿಯ ಬೆನ್ನೆಲುಬು ಎಂದು ಕೇಂದ್ರ ಅತಿಸಣ್ಣ, ಸಣ್ಣ ಮತ್ತು ಮಧ್ಯಮ ಉದ್ಯಮಗಳ ಸಚಿವ ಜಿತಿನ್ ರಾಮ್ ಮಾಂಝಿ ತಿಳಿಸಿದ್ದಾರೆ.

ನವದೆಹಲಿಯಲ್ಲಿ ಇಂದು ನಡೆದ ಪಿಎಂ ವಿಶ್ವಕರ್ಮ **ಹಾತ್** 2026ರ ಉದ್ಘಾಟನಾ ಸಮಾರಂಭವನ್ನು ಉದ್ದೇಶಿಸಿ ಮಾತನಾಡಿದ ಮಾಂಝಿ, ಈ ಕಾರ್ಯಕ್ರಮವು ಕುಶಲಕರ್ಮಿಗಳಿಗೆ ತಮ್ಮ ಉತ್ಪನ್ನಗಳನ್ನು ಬ್ರ್ಯಾಂಡಿಂಗ್ ಮತ್ತು ಮಾರಾಟ ಮಾಡಲು ವೇದಿಕೆಯನ್ನು ಒದಗಿಸುತ್ತಿದೆ. ಈ ಯೋಜನೆಯು ದೇಶದಲ್ಲಿ ನಿರುದ್ಯೋಗವನ್ನು ಕೊನೆಗೊಳಿಸುವ ಒಂದು ಮಾಧ್ಯಮವಾಗಿದೆ. ಈ ಕಾರ್ಯಕ್ರಮದಲ್ಲಿ ಭಾಗವಹಿಸುವ ಕುಶಲಕರ್ಮಿಗಳ ಕರಕುಶಲತೆಯನ್ನು ಅವರು ಶ್ಲಾಘಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಎಂಎಸ್ಎಂಇ ರಾಜ್ಯ ಸಚಿವೆ ಶೋಭಾ ಕರಂದ್ಲಾಜೆ, ಪಿಎಂ ವಿಶ್ವಕರ್ಮ ಯೋಜನೆಯು ತಾಂತ್ರಿಕ ನೆರವು, ತರಬೇತಿ ಮತ್ತು ಸರಿಯಾದ ಮಾರುಕಟ್ಟೆಗಳಿಗೆ ಪ್ರವೇಶವನ್ನು ಒದಗಿಸುವ ಮೂಲಕ ಕುಶಲಕರ್ಮಿಗಳಿಗೆ ಬೆಂಬಲ ನೀಡುತ್ತಿದೆ. ಮುಂಬರುವ ದಿನಗಳಲ್ಲಿ, ಈ ಕುಶಲಕರ್ಮಿಗಳು ಉದ್ಯಮಿಗಳಾಗಿ ಹೊರಹೊಮ್ಮುತ್ತಾರೆ ಮತ್ತು ದೇಶದ ವಿಕಸಿತ ಭಾರತದ ಕಡೆಗೆ ಕೊಡುಗೆ ನೀಡುತ್ತಾರೆ ಎಂದು ಸಚಿವರು ಹೇಳಿದರು.

ಈ ಪ್ರದರ್ಶನವು ಕುಶಲಕರ್ಮಿಗಳು ತಮ್ಮ ಕರಕುಶಲ ಉತ್ಪನ್ನಗಳನ್ನು ರಾಷ್ಟ್ರೀಯ ಮತ್ತು ಅಂತಾರಾಷ್ಟ್ರೀಯ ಖರೀದಿದಾರರು, ಪಾಲುದಾರರು ಮತ್ತು ಸಾರ್ವಜನಿಕರಿಗೆ ಪ್ರದರ್ಶಿಸಲು ಮತ್ತು ಮಾರಾಟ ಮಾಡಲು ಒಂದು ಪ್ರಮುಖ ವೇದಿಕೆಯನ್ನು ಒದಗಿಸುವ ಗುರಿಯನ್ನು ಹೊಂದಿದೆ.

***************

ಅಂಡಮಾನ್ ಸಮುದ್ರದಲ್ಲಿ ಭಾರತದ ಮೊದಲ ತೆರೆದ ಸಮುದ್ರ ಮೀನು ಸಾಕಣೆ ಯೋಜನೆಯನ್ನು ಕೇಂದ್ರ ಭೂ ವಿಜ್ಞಾನ ರಾಜ್ಯ ಸಚಿವ ಡಾ. ಜಿತೇಂದ್ರ ಸಿಂಗ್ ಇಂದು ಉದ್ಘಾಟಿಸಿದರು.

ಭಾರತದ ವಿಶಾಲ ಸಾಗರ ಸಂಪನ್ಮೂಲಗಳ ಮೂಲಕ ನೀಲಿ ಆರ್ಥಿಕತೆಯನ್ನು ಸಾಕಾರಗೊಳಿಸುವ ದಿಕ್ಕಿನಲ್ಲಿ ಈ ಉಪಕ್ರಮವು ಮೊದಲ ಪ್ರಮುಖ ಹೆಜ್ಜೆಗಳಲ್ಲಿ ಒಂದಾಗಿದೆ. ಈ ಯೋಜನೆಯನ್ನು ಅಂಡಮಾನ್ ಉತ್ತರ ಕೊಲ್ಲಿ ಪ್ರದೇಶದ ಶ್ರೀ ವಿಜಯ ಪುರಂನಲ್ಲಿ ಸಮುದ್ರದಲ್ಲಿ ಪ್ರಾರಂಭಿಸಲಾಯಿತು.

ಈ ಯೋಜನೆಯನ್ನು ಭಾರತ ಸರ್ಕಾರದ ಭೂ ವಿಜ್ಞಾನ ಸಚಿವಾಲಯ, ಅದರ ತಾಂತ್ರಿಕ ವಿಭಾಗವಾದ ರಾಷ್ಟ್ರೀಯ ಸಾಗರ ತಂತ್ರಜ್ಞಾನ ಸಂಸ್ಥೆ ಮತ್ತು ಅಂಡಮಾನ್ ಮತ್ತು ನಿಕೋಬಾರ್ ದ್ವೀಪಗಳ ಕೇಂದ್ರಾಡಳಿತ ಪ್ರದೇಶ ಆಡಳಿತದ ಸಹಯೋಗದ ಮೂಲಕ ಕಾರ್ಯಗತಗೊಳಿಸಲಾಗುತ್ತಿದೆ. ಈ ಪ್ರಾಯೋಗಿಕ ಉಪಕ್ರಮವು ನೈಸರ್ಗಿಕ ಸಾಗರ ಪರಿಸ್ಥಿತಿಗಳಲ್ಲಿ ಸಮುದ್ರ ಫಿನ್‌ಫಿಶ್ ಮತ್ತು ಕಡಲಕಳೆಗಳ ತೆರೆದ ಸಮುದ್ರ ಕೃಷಿಯ ಮೇಲೆ ಕೇಂದ್ರೀಕರಿಸುತ್ತದೆ, ವೈಜ್ಞಾನಿಕ ನಾವೀನ್ಯತೆಯನ್ನು ಜೀವನೋಪಾಯ ಉತ್ಪಾದನೆಯೊಂದಿಗೆ ಸಂಯೋಜಿಸುತ್ತದೆ.

ಕ್ಷೇತ್ರ ಭೇಟಿಯ ಸಮಯದಲ್ಲಿ, ಸಮುದ್ರ ಸಸ್ಯ ಘಟಕದ ಅಡಿಯಲ್ಲಿ, ತೆರೆದ ಸಮುದ್ರದಲ್ಲಿ ಆಳವಾದ ನೀರಿನ ಕಡಲಕಳೆ ಕೃಷಿಯನ್ನು ಉತ್ತೇಜಿಸಲು ಸಚಿವರು ಸ್ಥಳೀಯ ಮೀನುಗಾರಿಕಾ ಸಮುದಾಯಗಳಿಗೆ ಕಡಲಕಳೆ ಬೀಜಗಳನ್ನು ಹಸ್ತಾಂತರಿಸಿದರು. ಸಮುದ್ರಜೀವಿ ಘಟಕದ ಅಡಿಯಲ್ಲಿ, ನೈಸರ್ಗಿಕ ಸಾಗರ ಪರಿಸರದಲ್ಲಿ ಕಾರ್ಯನಿರ್ವಹಿಸಲು ವಿನ್ಯಾಸಗೊಳಿಸಲಾದ NIOT-ಅಭಿವೃದ್ಧಿಪಡಿಸಿದ ತೆರೆದ ಸಮುದ್ರ ಪಂಜರಗಳಿಂದ ಬೆಂಬಲಿತವಾದ ಪಂಜರ ಆಧಾರಿತ ಕೃಷಿಗಾಗಿ ಫಿನ್‌ಫಿಶ್ ಮೊಟ್ಟೆಗಳನ್ನು ವಿತರಿಸಲಾಯಿತು.

***************

ಸ್ವಿಟ್ಜರ್ಲೆಂಡ್‌ನ ದಾವೋಸ್‌ನಲ್ಲಿ ವಿಶ್ವ ಆರ್ಥಿಕ ವೇದಿಕೆ ಸಭೆ ನಾಳೆಯಿಂದ ಆರಂಭವಾಗಲಿದೆ. ದಾವೋಸ್‌ನಲ್ಲಿ ನಡೆಯುವ 56ನೇ ವಾರ್ಷಿಕ ಸಭೆಯಲ್ಲಿ 3,000 ಕ್ಕೂ ಹೆಚ್ಚು ಜಾಗತಿಕ ನಾಯಕರು ಭಾಗವಹಿಸುತ್ತಿದ್ದಾರೆ.

ಐದು ದಿನಗಳ ಈ ಚರ್ಚಾಕೂಟದಲ್ಲಿ ಭಾಗವಹಿಸಲು 100ಕ್ಕೂ ಹೆಚ್ಚು ಭಾರತೀಯ ಕಾರ್ಯನಿರ್ವಹಣಾಧಿಕಾರಿಗಳು ಸರ್ಕಾರಿ ನಿಯೋಗದೊಂದಿಗೆ ಸ್ವಿಸ್ ಪಟ್ಟಣ ತಲುಪಿದ್ದಾರೆ.

ಅಶ್ವಿನಿ ವೈಷ್ಣವ್, ಪ್ರಹ್ಲಾದ್ ಜೋಶಿ ಮತ್ತು ಕೆ ರಾಮಮೋಹನ್ ನಾಯ್ಡು ಸೇರಿದಂತೆ ಹಿರಿಯ ಕೇಂದ್ರ ಸಚಿವರು ಭಾಗವಹಿಸುವ ನಿರೀಕ್ಷೆಯಿದ್ದು, ದ್ವಿಪಕ್ಷೀಯ ಸಭೆಗಳನ್ನು ನಡೆಸಲಿದ್ದಾರೆ, ಮಹಾರಾಷ್ಟ್ರ, ಆಂಧ್ರಪ್ರದೇಶ, ಮಧ್ಯಪ್ರದೇಶ, ಅಸ್ಸಾಂ ಮತ್ತು ಜಾರ್ಖಂಡ್ ಮುಖ್ಯಮಂತ್ರಿಗಳು ತಮ್ಮ ರಾಜ್ಯಗಳನ್ನು ಸಂಭಾವ್ಯ ಹೂಡಿಕೆದಾರರಿಗೆ ಪ್ರದರ್ಶಿಸಲಿದ್ದಾರೆ. ಕರ್ನಾಟಕ, ಉತ್ತರ ಪ್ರದೇಶ, ಕೇರಳ ಮತ್ತು ತೆಲಂಗಾಣ ಸೇರಿದಂತೆ ವಿವಿಧ ರಾಜ್ಯ ಸರ್ಕಾರಗಳ ಮಂಟಪಗಳು ಸಹ ಇವೆ.

***************

ವಿದೇಶಾಂಗ ವ್ಯವಹಾರಗಳ ಸಚಿವ ಡಾ.ಎಸ್.ಜೈಶಂಕರ್ ದೆಹಲಿಯಲ್ಲಿ ಇಂದು ಅಮೆರಿಕದ ಸೆನೆಟರ್ ಸ್ಟೀವ್ ಡೈನ್ಸ್ ಅವರನ್ನು ಭೇಟಿ ಮಾಡಿ ಚರ್ಚಿಸಿದರು.

ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ಡಾ.ಜೈಶಂಕರ್, ಸಭೆಯಲ್ಲಿ ಉಭಯ ದೇಶಗಳು ದ್ವಿಪಕ್ಷೀಯ ಸಂಬಂಧಗಳ ಕಾರ್ಯತಂತ್ರದ ಮಹತ್ವದ ಕುರಿತು ವ್ಯಾಪಕ ಚರ್ಚೆ ನಡೆಸಲಾಯಿತು ಎಂದು ಹೇಳಿದರು.

***************

ಜಮ್ಮು ಮತ್ತು ಕಾಶ್ಮೀರದ ಕಿಶ್ತ್ವಾರ್ ಜಿಲ್ಲೆಯ ದೂರದ ಅರಣ್ಯ ಪ್ರದೇಶದಲ್ಲಿ ಇಂದು ಭದ್ರತಾ ಪಡೆಗಳು ಮತ್ತು ಭಯೋತ್ಪಾದಕರ ನಡುವೆ ಗುಂಡಿನ ಚಕಮಕಿ ನಡೆದಿದೆ.

ಕಿಶ್ತ್ವಾರ್ ಜಿಲ್ಲೆಯ ಸಿಂಗ್‌ಪೋರ್ ಗ್ರಾಮದಲ್ಲಿ ಗುಂಡಿನ ಚಕಮಕಿ ನಡೆದಿರುವುದು ವರದಿಯಾಗಿದೆ.

***************

ಇಂದೋರ್ ನ ಹೋಲ್ಕರ್ ಕ್ರೀಡಾಂಗಣದಲ್ಲಿ ಇಂದು ನಡೆಯುತ್ತಿರುವ ಭಾರತ ಹಾಗೂ ನ್ಯೂಜಿಲ್ಯಾಂಡ್ ನಡುವಿನ ಮೂರು ಪಂದ್ಯಗಳ ಏಕದಿನ ಕ್ರಿಕೆಟ್ ಸರಣಿಯ ಮೂರನೇ ಹಾಗೂ ಅಂತಿಮ ಪಂದ್ಯದಲ್ಲಿ ನ್ಯೂಜಿಲ್ಯಾಂಡ್ ತಂಡ, ಭಾರತಕ್ಕೆ 338 ರನ್ ಗಳ ಗುರಿ ನೀಡಿದೆ.

ಟಾಸ್ ಸೋತು ಮೊದಲು ಬ್ಯಾಟ್ ಮಾಡಿದ ನ್ಯೂಜಿಲ್ಯಾಂಡ್, ನಿಗದಿತ 50 ಓವರ್ ಗಳಲ್ಲಿ 8 ವಿಕೆಟ್ ನಷ್ಟಕ್ಕೆ 337 ರನ್ ಗಳಿಸಿತು.

ಗುರಿ ಬೆನ್ನತ್ತಿರುವ ಭಾರತ ತಂಡ ಇತ್ತೀಚಿನ ವರದಿ ಬಂದಾಗ 20 ಓವರ್ ಗಳಲ್ಲಿ 4 ವಿಕೆಟ್ ನಷ್ಟಕ್ಕೆ 108 ರನ್ ಗಳಿಸಿ ಆಡುತ್ತಿದೆ.

ಈಗಾಗಲೇ ನಡೆದಿರುವ ಸರಣಿಯ ಎರಡು ಪಂದ್ಯಗಳಲ್ಲಿ ಉಭಯ ತಂಡಗಳು ತಲಾ ಒಂದು ಪಂದ್ಯವನ್ನು ಜಯಿಸಿ ಸಮಬಲ ಸಾಧಿಸಿದ್ದು, ಸರಣಿ ಕೈವಶ ಮಾಡಿಕೊಳ್ಳಲು ಈ ಪಂದ್ಯ ನಿರ್ಣಾಯಕವಾಗಿದೆ.

*********ಮುಕ್ತಾಯ**********